I.C.D. MANASAGANGOTRI
UNIVERSITY OF MYSORE, MYSORE
MGM/ICD/
251/2025-26
Dated-
10/07/2025

ದೂರವಾಣಿ ಸಂಖ್ಯೆ: 2419277/2419210
ಫ್ಯಾಕ್ಸ್: 0821-2419363/2419301

e-mail registrar@Uni-mysore-ac-in
www.uni-mysore-ac-in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ: ಯುಎ-3/171/2024-2025

ದಿನಾಂಕ 09-07-2025

ಅಡಕ: ನಡವಳಿ ಪ್ರತಿಗಳು 1-7

**"ಪ್ರಮಾಣಿತ ಅಂಚೆ ಮೂಲಕ"**

ಶಿಕ್ಷಣ ಮಂಡಳಿ ಸದಸ್ಯರುಗಳಿಗೆ,

ಮಾನ್ಯರೆ,

ವಿಷಯ: ದಿನಾಂಕ: 30-06-2025ರಂದು ನಡೆದ ಶಿಕ್ಷಣ ಮಂಡಳಿ ಸಾಮಾನ್ಯ ಸಭೆಯ ನಡಾವಳಿಯನ್ನು ಕಳುಹಿಸುವ ಬಗ್ಗೆ.

* * * * *

ದಿನಾಂಕ:30-06-2025 ರಂದು ಬೆಳಗ್ಗೆ 11-30 ಗಂಟೆಗೆ, ಕ್ರಾಫರ್ಡ್ ಭವನದ ಶಿಕ್ಷಣ ಮಂಡಳಿ ಸಭಾಂಗಣದಲ್ಲಿ ನಡೆದ, ಶಿಕ್ಷಣ ಮಂಡಳಿ ಸಾಮಾನ್ಯ ಸಭೆಯ ನಡಾವಳಿಗಳ ಪ್ರತಿಯನ್ನು ತಮ್ಮ ಮಾಹಿತಿಗಾಗಿ ಈ ಮೂಲಕ ಕಳುಹಿಸಿಕೊಡಲಾಗಿದೆ, ನಡಾವಳಿಯಲ್ಲಿ ದಾಖಲಿಸಿರುವ ಯಾವುದೇ ಅಂಶದ ಯಥಾರ್ಥತೆಯ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಂದ ನಡಾವಳಿಯ ಬಗ್ಗೆ ನಿಮ್ಮ ಆಕ್ಷೇಪಣೆ(ಗಳು) ಏನಾದರೂ ಇದ್ದಲ್ಲಿ "ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಕ್ರಾಫರ್ಡ್ ಭವನ, ಮೈಸೂರು" ಇವರನ್ನು ಉದ್ದೇಶಿಸಿ ಬರೆದ ಪತ್ರವನ್ನು ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಕ್ರಾಫರ್ಡ್ ಭವನ, ಮೈಸೂರು-570005 ಇವರಿಗೆ ನೇರವಾಗಿ ತಲುಪಿಸುವಂತೆ ಕೋರಲಾಗಿದೆ. ಸದರಿ ನಡಾವಳಿಗಳಿಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ, ನಡಾವಳಿಯಲ್ಲಿ ದಾಖಲಿಸಿರುವ ಎಲ್ಲಾ ಅಂಶಗಳು ಸರಿಯಾಗಿವೆ ಎಂದು ಪರಿಗಣಿಸಲ್ಪಡುತ್ತವೆ.

ತಮ್ಮ ನಂಬುಗೆಯ

Lingaraju

ಉಪ ಕುಲಸಚಿವ (ಪ್ರಾಧಿಕಾರ)
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು.

ಪ್ರತಿ:

1. ಗೌರವಾನ್ವಿತ ರಾಜ್ಯಪಾಲರ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು – ಘನತೆವೆತ್ತ ರಾಜ್ಯಪಾಲರ ಅವಗಹಾನೆಗೆ ತರಬೇಕಾಗಿ ಕೋರಲಾಗಿದೆ.
2. ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ವಿಶ್ವವಿದ್ಯಾನಿಲಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ನಿರ್ದೇಶಕರು, ಪಿ.ಎಂ.ಇ.ಬಿ/ ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ನಿರ್ದೇಶಕರು, ವಿದ್ಯಾರ್ಥಿಕ್ಷೇಮಪಾಲನ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು.
6. ಸಂಯೋಜಕರು, (ICD) ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ಶಿಕ್ಷಣ ಮಂಡಳಿ ಸಭೆಯ ನಡಾವಳಿಯನ್ನು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಅಳವಡಿಸಲು ಕ್ರಮವಹಿಸುವುದು.
7. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು(ಶೈಕ್ಷಣಿಕ/ಆಡಳಿತ/ಅಭಿವೃದ್ಧಿ/ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿಶೇಷ ಘಟಕ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಕಛೇರಿ ಪ್ರತಿ.

AC Forwarding letter

# ಮೈಸೂರು ವಿಶ್ವವಿದ್ಯಾನಿಲಯ

ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನ ಶಿಕ್ಷಣ ಮಂಡಳ ಸಭಾಂಗಣದಲ್ಲಿ ದಿನಾಂಕ: 30-06-2025 ರಂದು ಪೂರ್ವಾಹ್ನ 11.30 ಗಂಟೆಗೆ ನಡೆದ ವಿದ್ಯಾವಿಷಯಕ ಪರಿಷತ್ ಸಾಮಾನ್ಯ ಸಭೆಯ ನಡಾವಳ.

<u>ಉಪಸ್ಥಿತರು:</u>

| | | |
|---|---|---|
| 1. | ಪ್ರೊ. ಎನ್.ಕೆ.ಲೋಕನಾಥ್, ಕುಲಪತಿಗಳು | ಅಧ್ಯಕ್ಷರು |
| 2. | ಶ್ರೀ ಕೆ.ವಿವೇಕಾನಂದ, ವಿಧಾನ ಪರಿಷತ್ ಸದಸ್ಯರು | ಸದಸ್ಯರು |
| 3. | ಡಾ. ಗಣೇಶ ಕೆ | ಸದಸ್ಯರು |
| 4. | ಡಾ. ಅಂತೋಣಿ ಪೌಲ್ ರಾಜ್.ಸಿ | ಸದಸ್ಯರು |
| 5. | ಡಾ. ಪ್ರಿಯ ಸಿ ಜೆ | ಸದಸ್ಯರು |
| 6. | ಶ್ರೀಮತಿ ಕೆ.ಎಂ ಪದ್ಮಾವತಿ | ಸದಸ್ಯರು |
| 7. | ಪ್ರೊ. ಎಸ್.ಜೆ.ಮಂಜುನಾಥ್, ಡೀನರು, ವಿಶ್ವವಿದ್ಯಾನಿಲಯ ಸ್ಕೂಲ್ ಆಫ್ ಇಂಜಿನಿಯರಿಂಗ್ ನಿಕಾಯ | ಸದಸ್ಯರು |
| 8. | ಪ್ರೊ. ಎಂ. ಸುರೇಶ್ ಬೆಂಜಮೀನ್, ಡೀನರು, ಕಾನೂನು ನಿಕಾಯ | ಸದಸ್ಯರು |
| 9. | ಪ್ರೊ. ಸಿ. ವೆಂಕಟೇಶ್, ಡೀನರು, ಶಿಕ್ಷಣ ನಿಕಾಯ ಹಾಗೂ ನಿರ್ದೇಶಕರು (ಪ್ರಭಾರ), ದೈಹಿಕ ಶಿಕ್ಷಣ ವಿಭಾಗ | ಸದಸ್ಯರು |
| 10. | ಪ್ರೊ. ಜಿ.ಆರ್.ಜನಾರ್ಧನ, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ | ಸದಸ್ಯರು |
| 11. | ಪ್ರೊ. ಎಂ.ಎಸ್ ಶೇಖರ್, ಡೀನರು, ಕಲಾ ನಿಕಾಯ | ಸದಸ್ಯರು |
| 12. | ಪ್ರೊ. ಕೆ. ನಾಗೇಂದ್ರ ಬಾಬು, ಡೀನರು, ವಾಣಿಜ್ಯ ನಿಕಾಯ | ಸದಸ್ಯರು |
| 13. | ಪ್ರೊ. ಕೆ. ಮಂಟೇಲಿಂಗು, ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳ | ಸದಸ್ಯರು |
| 14. | ಪ್ರೊ. ಕೆ. ಕೆಂಪರಾಜು | ಸದಸ್ಯರು |
| 15. | ಪ್ರೊ. ಜೆ.ಸೋಮಶೇಖರ್ | ಸದಸ್ಯರು |
| 16. | ಪ್ರೊ. ಸುರೇಶ್ | ಸದಸ್ಯರು |
| 17. | ಕು. ತನುಜ ಎನ್ | ಸದಸ್ಯರು |
| 18. | ಕು. ರೋಕಿಯಾ ಬೇಗಂ | ಸದಸ್ಯರು |
| 19. | ಕು. ಪುಷ್ಪಲತಾ ಹೆಚ್.ಎನ್ | ಸದಸ್ಯರು |
| 20. | ಕು. ಅದಿತಿ ಎನ್ | ಸದಸ್ಯರು |
| 21. | ಕು. ವಸಂತ ಕುಮಾರಿ ಎಸ್ | ಸದಸ್ಯರು |
| 22. | ಶ್ರೀ ದರ್ಶನ್ ಡಿ, ಸಂಶೋಧನಾ ವಿದ್ಯಾರ್ಥಿ | ಸದಸ್ಯರು |
| 23. | ಪ್ರೊ. ಸಿ.ಗುರುಸಿದ್ದಯ್ಯ, ನಿರ್ದೇಶಕರು (ಪ್ರಭಾರ), ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು | ಸದಸ್ಯರು |
| 24. | ಪ್ರೊ. ಎನ್.ನಾಗರಾಜ, ಕುಲಸಚಿವರು (ಪರೀಕ್ಷಾಂಗ) ಹಾಗೂ ನಿರ್ದೇಶಕರು, ಯೋಜನೆ ಉಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳ | ಸದಸ್ಯರು |
| 25. | ಶ್ರೀಮತಿ ರೇಖಾ.ಕೆ.ಎಸ್, ಕೆ.ಎಸ್.ಎ.ಎಸ್ ಹಣಕಾಸು ಅಧಿಕಾರಿಗಳು | ಸದಸ್ಯರು |
| 26. | ಶ್ರೀಮತಿ ಎಂ.ಕೆ.ಸವಿತಾ. ಕೆ.ಎ.ಎಸ್. ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಅನುಪಸ್ಥಿತರು:**

| | | |
|---|---|---|
| 1. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಪರವಾಗಿ<br>ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಮೈಸೂರು. | ಸದಸ್ಯರು |
| 2. | ಶ್ರೀ ದರ್ಶನ್ ಧ್ರುವನಾರಾಯಣ್, ವಿಧಾನ ಸಭಾ ಸದಸ್ಯರು | ಸದಸ್ಯರು |
| 3. | ಶ್ರೀ ಎಂ.ಪಿ.ಕುಶಾಲಪ್ಪ, ವಿಧಾನ ಪರಿಷತ್ ಸದಸ್ಯರು | ಸದಸ್ಯರು |
| 4. | ಪ್ರೊ. ಯಜ್ಞಮೂರ್ತಿ ಶ್ರೀಕಾಂತ್ | ಸದಸ್ಯರು |
| 5. | ಡಾ. ಮುಜೀದ ಬಾನು | ಸದಸ್ಯರು |
| 6. | ಪ್ರೊ. ಕೆ. ಸದಾಶಿವ | ಸದಸ್ಯರು |
| 7. | ಪ್ರೊ. ಹೆಚ್.ಡಿ ರೇವಣ್ಣಸಿದ್ದಪ್ಪ | ಸದಸ್ಯರು |
| 8. | ಡಾ. ಸರಸ್ವತಿ.ಪಿ, ಗ್ರಂಥಪಾಲಕರು (ಪ್ರಭಾರ), ವಿಶ್ವವಿದ್ಯಾನಿಲಯ ಗ್ರಂಥಾಲಯ | ಸದಸ್ಯರು |

ಮೊದಲಿಗೆ ಮಾನ್ಯ ಕುಲಸಚಿವರು ಮಾತನಾಡಿ, ಶಿಕ್ಷಣ ಮಂಡಳ ಸಭೆಯ ಅಧ್ಯಕ್ಷರಾಗಿರುವ ಸನ್ಮಾನ್ಯ ಕುಲಪತಿಗಳಾದ ಪ್ರೊ. ಎನ್.ಕೆ ಲೋಕನಾಥ್ ಅವರನ್ನು, ಉಪಸ್ಥಿತರಾಗಿರುವ ಗೌರವಾನ್ವಿತ ಎಲ್ಲಾ ನಿಕಾಯದ ಡೀನರುಗಳು, ಅಧಿಕಾರಿ ವರ್ಗದವರು, ಸದಸ್ಯರುಗಳನ್ನು ಹಾಗೂ ಪತ್ರಿಕಾ ಮಾಧ್ಯಮದವರುಗಳನ್ನು ಸಭೆಗೆ ಸ್ವಾಗತಿಸಿದರು.

ನಂತರ ಹೊಸದಾಗಿ ಶಿಕ್ಷಣ ಮಂಡಳ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ ಈ ಕೆಳಕಂಡ ಸದಸ್ಯರುಗಳನ್ನು ಸಭೆಗೆ ಪರಿಚಯಿಸಿ ಸ್ವಾಗತಿಸಿದರು.

1. ಶ್ರೀ ಕೆ. ವಿವೇಕಾನಂದ, ವಿಧಾನ ಪರಿಷತ್ತಿನ ಮಾನ್ಯ ಶಾಸಕರು, ಕರ್ನಾಟಕ ಸರ್ಕಾರ, ಬೆಂಗಳೂರು.
2. ಪ್ರೊ. ಜೆ. ಸೋಮಶೇಖರ್, ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣ ಕೇಂದ್ರ, ಮಾನಸಗಂಗೋತ್ರಿ, ಮೈಸೂರು.

ಹಾಗೂ ಇದುವರೆವಿಗೂ ಶಿಕ್ಷಣ ಮಂಡಳ ಸದಸ್ಯರಾಗಿ ಸೇವೆ ಸಲ್ಲಿಸಿ ನಿರ್ಗಮಿಸಿರುವ ಪ್ರೊ. ಆನಂದ್.ಡಿ, ವ್ಯವಹಾರ ಆಡಳಿತ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ಸೇವೆಯನ್ನು ಸ್ಮರಿಸಿ ನಡವಳಿಯಲ್ಲಿ ದಾಖಲಿಸಲಾಯಿತು.

ಮಾನ್ಯ ಕುಲಪತಿಯವರ ಅನುಮತಿಯ ಮೇರೆಗೆ, ಈ ಕೆಳಕಂಡ ಕಾರ್ಯಸೂಚಿಗಳನ್ನು ಕುಲಸಚಿವರು ಸಭೆಯಲ್ಲಿ ಮಂಡಿಸಿದರು.

| ವಿಷಯ ಸಂಕ್ಷಿಪ್ತವಾಗಿ | |
|---|---|
| I.I | ದಿನಾಂಕ: 04-04-2025ರಂದು ಜರುಗಿದ ಶಿಕ್ಷಣ ಮಂಡಳ ವಿಶೇಷ ಸಭೆಯ ನಡಾವಳಿಯನ್ನು ದೃಢೀಕರಿಸುವ ಬಗ್ಗೆ. |
| ತೀರ್ಮಾನ | ದಿನಾಂಕ: 04-04-2025ರಂದು ಜರುಗಿದ ಶಿಕ್ಷಣ ಮಂಡಳ ವಿಶೇಷ ಸಭೆಯ ನಡಾವಳಿಯನ್ನು ದೃಢೀಕರಿಸಲಾಯಿತು. |

| | |
|---|---|
| II.1 | ಮೈಸೂರು ವಿಶ್ವವಿದ್ಯಾನಿಲಯದಲ್ಲಿ "Smt. Gowramma Shankarappa, Shri T.K. Shankarappa and Kum. Chudarathna Endowment Lecture" ಸ್ಥಾಪನೆ ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ ೨೦೦೦ರ ಪ್ರಕರಣ 31 (2) (ix) ಪ್ರಕಾರ ದಾನಿಯು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ ಪ್ರತಿ ವರ್ಷ ಸದರಿ ದತ್ತಿಯ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.೨೦ ರಷ್ಟನ್ನು ದತ್ತಿಯ ಮೂಲಧನಕ್ಕೆ ಸೇರಿಸಿ ಉಳಿದ ಶೇ.೮೦ ರಷ್ಟು ಬಡ್ಡಿಯ ಹಣವನ್ನು "Biochemistry of Metabolic Disorders" ವಿಷಯಕ್ಕೆ ಸಂಬಂಧಿಸಿದಂತೆ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸುವಂತೆ ಹಾಗೂ ಮೈಸೂರು ವಿಶ್ವವಿದ್ಯಾನಿಲಯದ ಜೀವರಸಾಯನಶಾಸ್ತ್ರ ಅಧ್ಯಯನ ವಿಭಾಗದ ಕೆಲವು ವಿದ್ಯಾರ್ಥಿಗಳಿಗೆ ಕಿರು ಸಂಶೋಧನಾ ಕಾರ್ಯಕ್ಕಾಗಿ ವಿದ್ಯಾರ್ಥಿವೇತನವನ್ನು ನೀಡುವ ಸಂಬಂಧ "Smt. Gowramma Shankarappa, Shri T.K. Shankarappa and Kum. Chudarathna Endowment Lecture" ದತ್ತಿ ಉಪನ್ಯಾಸ ಸ್ಥಾಪಿಸಲು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| II.2 | ಮೈಸೂರು ವಿಶ್ವವಿದ್ಯಾನಿಲಯದಲ್ಲಿ "ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ದಿ॥ ಎಸ್.ಎಂ. ಕೃಷ್ಣ ನಗದು ಬಹುಮಾನ ದತ್ತಿ ಪ್ರಶಸ್ತಿ" ಸ್ಥಾಪನೆ ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ ೨೦೦೦ರ ಪ್ರಕರಣ 31 (2) (ix) ಪ್ರಕಾರ ದಾನಿಯು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ ಪ್ರತಿ ವರ್ಷ ಸದರಿ ದತ್ತಿಯ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.೨೦ ರಷ್ಟನ್ನು ದತ್ತಿಯ ಮೂಲಧನಕ್ಕೆ ಸೇರಿಸಿ ಉಳಿದ ಶೇ.೮೦ ರಷ್ಟು ಬಡ್ಡಿಯ ಹಣವನ್ನು ಸ್ನಾತಕೋತ್ತರ ಅರ್ಥಶಾಸ್ತ್ರ ಮತ್ತು ಸ್ನಾತಕೋತ್ತರ ರಾಜ್ಯಶಾಸ್ತ್ರ ಪತ್ರಿಕೆಯಲ್ಲಿ ಪ್ರಥಮ ಬಾರಿಗೆ ತೇರ್ಗಡೆಯಾಗಿ ಅತೀ ಹೆಚ್ಚು ಅಂಕ ಗಳಿಸುವ ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ನಗದು ಬಹುಮಾನವನ್ನು ಪ್ರದಾನ ಮಾಡುವ ಸಂಬಂಧ "ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ದಿ॥ ಎಸ್.ಎಂ.ಕೃಷ್ಣ ನಗದು ಬಹುಮಾನ ದತ್ತಿ ಪ್ರಶಸ್ತಿ" ಸ್ಥಾಪಿಸಲು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| II.3 | ಮೈಸೂರು ವಿಶ್ವವಿದ್ಯಾನಿಲಯದಲ್ಲಿ "ಪ್ರೊ. ಕೆ.ಎಂ. ಶಫಿಉಲ್ಲಾ ಮತ್ತು ಪ್ರೊ. ಹೆಚ್. ಶೇಖರ್ ಶೆಟ್ಟಿ – ಡೌನಿಮಿಲ್ಡಿವ್ ರಿಸರ್ಚ್ ಲ್ಯಾಬೊರೇಟರಿ" ದತ್ತಿ ಸ್ಥಾಪನೆ ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ ೨೦೦೦ರ ಪ್ರಕರಣ 31 (2) (ix) ಪ್ರಕಾರ ದಾನಿಯು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ ಪ್ರತಿ ವರ್ಷ ಸದರಿ ದತ್ತಿಯ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.೨೦ ರಷ್ಟನ್ನು ದತ್ತಿಯ ಮೂಲಧನಕ್ಕೆ ಸೇರಿಸಿ ಉಳಿದ ಶೇ.೮೦ ರಷ್ಟು ಬಡ್ಡಿಯ ಹಣವನ್ನು ಪ್ರತಿ ವರ್ಷ ಜೀವ ವಿಜ್ಞಾನ ವಿದ್ಯಾರ್ಥಿಗಳ, ಸಂಶೋಧನಾ ವಿದ್ಯಾರ್ಥಿಗಳ ಮತ್ತು ಅಧ್ಯಾಪಕರುಗಳ ಪ್ರಯೋಜನಕ್ಕಾಗಿ ಹೆಸರಾಂತ ಪ್ರೊಫೆಸರ್/ವಿಜ್ಞಾನಿಗಳನ್ನು ಆಹ್ವಾನಿಸಿ ದತ್ತಿ ಉಪನ್ಯಾಸವನ್ನು ಏರ್ಪಡಿಸುವ ಸಂಬಂಧ "ಪ್ರೊ. ಕೆ.ಎಂ. ಶಫಿಉಲ್ಲಾ ಮತ್ತು ಪ್ರೊ. ಹೆಚ್. ಶೇಖರ್ ಶೆಟ್ಟಿ – ಡೌನಿಮಿಲ್ಡಿವ್ ರಿಸರ್ಚ್ ಲ್ಯಾಬೊರೇಟರಿ" ದತ್ತಿ ಸ್ಥಾಪಿಸಲು ವಿದ್ಯಾವಿಷಯಕ ಪರಿಷತ್ ಮಂಡಳ ಸಭೆಯು ಅನುಮೋದಿಸಿತು. |

| | |
|---|---|
| II.4 | ಮೈಸೂರು ವಿಶ್ವವಿದ್ಯಾನಿಲಯದಲ್ಲಿ Prof. Y.B. Basavaraju Cash Prize ದತ್ತಿ ಸ್ಥಾಪನೆ ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಪ್ರಕರಣ 31 (2) (ix) ಪ್ರಕಾರ ದಾನಿಯು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ ಪ್ರತಿ ವರ್ಷ ಸದರಿ ದತ್ತಿಯ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.20 ರಷ್ಟನ್ನು ದತ್ತಿಯ ಮೂಲಧನಕ್ಕೆ ಸೇರಿಸಿ ಉಳಿದ ಶೇ.80 ರಷ್ಟು ಬಡ್ಡಿಯ ಹಣವನ್ನು ಎಂ.ಎಸ್ಸಿ ರಸಾಯನಶಾಸ್ತ್ರ ವಿಷಯದಲ್ಲಿ ಪ್ರಥಮ ಬಾರಿಗೆ ತೇರ್ಗಡೆಯಾಗಿ ಎರಡನೆಯ ಅತೀ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗೆ ನಗದು ಬಹುಮಾನವನ್ನು ಪ್ರದಾನ ಮಾಡುವ ಸಂಬಂಧ Prof. Y.B. Basavaraju Cash Prize ದತ್ತಿ ಸ್ಥಾಪಿಸಲು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| II.5 | ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಶ್ರೀ ಸಿ.ಎಂ. ನಾರಾಯಣಸ್ವಾಮಿ ಮತ್ತು ಶ್ರೀಮತಿ ಬಿ.ಜಿ. ಶಾಂತಕುಮಾರಿ ಚಿನ್ನದ ಪದಕ ದತ್ತಿ ಸ್ಥಾಪನೆ ಮಾಡುವ ಬಗ್ಗೆ. |
| | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಪ್ರಕರಣ 31 (2) (ix) ಪ್ರಕಾರ ದಾನಿಯು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ ಪ್ರತಿ ವರ್ಷ ಸದರಿ ದತ್ತಿಯ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.20 ರಷ್ಟನ್ನು ದತ್ತಿಯ ಮೂಲಧನಕ್ಕೆ ಸೇರಿಸಿ ಉಳಿದ ಶೇ.80 ರಷ್ಟು ಬಡ್ಡಿಯ ಹಣವನ್ನು ಸ್ನಾತಕೋತ್ತರ ಪರೀಕ್ಷೆಯ ಕನ್ನಡ (ಅಂತಿಮ ಕನ್ನಡ ಎಂ.ಎ)ದಲ್ಲಿ ಪ್ರಥಮ ಬಾರಿಗೆ ತೇರ್ಗಡೆಯಾಗಿ, ಅತೀ ಹೆಚ್ಚು ಅಂಕ ಗಳಿಸುವ (ಎಲ್ಲಾ ಸೆಮಿಸ್ಟರ್‌ಗಳಿಗೆ ಶ್ರೇಣಿಯನ್ನು ಪ್ರಕಟಿಸುವ ಸಲುವಾಗಿ ಗಳಿಸಲಾಗುವ ಅಂಕಗಳನ್ನು ಪಡೆದು) ಅಭ್ಯರ್ಥಿಗೆ ಚಿನ್ನದ ಪದಕವನ್ನು ಪ್ರದಾನ ಮಾಡುವ ಸಂಬಂಧ "ಶ್ರೀ ಸಿ.ಎಂ. ನಾರಾಯಣಸ್ವಾಮಿ ಮತ್ತು ಶ್ರೀಮತಿ ಬಿ.ಜಿ. ಶಾಂತಕುಮಾರಿ ಚಿನ್ನದ ಪದಕ ದತ್ತಿ" ಸ್ಥಾಪಿಸಲು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| II.6 | ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಚಿನ್ನದ ಪದಕ/ನಗದು ಬಹುಮಾನ ದತ್ತಿಗಳನ್ನು ಸ್ಥಾಪನೆ ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಪ್ರಕರಣ 31 (2) (ix) ಪ್ರಕಾರ ದಾನಿಯು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ ಪ್ರತಿ ವರ್ಷ ಸದರಿ ದತ್ತಿಯ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.20 ರಷ್ಟನ್ನು ದತ್ತಿಯ ಮೂಲಧನಕ್ಕೆ ಸೇರಿಸಿ ಉಳಿದ ಶೇ.80 ರಷ್ಟು ಬಡ್ಡಿಯ ಹಣವನ್ನು ಈ ಕೆಳಕಂಡ 01 ಚಿನ್ನದ ಪದಕ ಮತ್ತು 03 ನಗದು ಬಹುಮಾನವನ್ನು ದತ್ತಿಯವರು ನಮೂದಿಸಿರುವ ಷರತ್ತಿನಂತೆ ಸಂಬಂಧಿತ ವಿಷಯ/ಪತ್ರಿಕೆಯಲ್ಲಿ ಪ್ರಥಮ ಬಾರಿಗೆ ತೇರ್ಗಡೆಯಾಗಿ ಅತೀ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗೆ ಚಿನ್ನದ ಪದಕ/ನಗದು ಬಹುಮಾನವನ್ನು ಪ್ರದಾನ ಮಾಡಲು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |

| | |
|---|---|
| ದತ್ತಿಯ ಹೆಸರು | 1) Shrimathi SundarammaVenkataramaiah Gold Medal |
| ಷರತ್ತುಗಳು | The Gold Medal Should be awarded to the <u>Female Candidate</u> who has passed Post Graduate Degree in Women Studies examination in First Attempt and Securing Highest Marks. |

| | |
|---|---|
| ದತ್ತಿಯ ಹೆಸರು | 2) ಪಿ. ವಿಲಾಸಕುಮಾರಿ ಶರ್ಮ ಸ್ಮರಣಾರ್ಥ ನಗದು ಬಹುಮಾನ |
| ಷರತ್ತುಗಳು | ಬಿ.ಪಿ.ಎ ಪರೀಕ್ಷೆಯಲ್ಲಿ ಗಮಕ ಪತ್ರಿಕೆಯಲ್ಲಿ (ಆರು ಸೆಮಿಸ್ಟರ್ ಅಂಕಗಳನ್ನು ಸೇರಿಸಿ) ಮೊದಲ ಬಾರಿಗೆ ತೇರ್ಗಡೆಯಾಗಿದ್ದು ಅತೀ ಹೆಚ್ಚು ಅಂಕ ಗಳಿಸುವ (ಯಾವುದೇ ವರ್ಷಗಳಿಗೆ/ ಸೆಮಿಸ್ಟರ್‌ಗಳಿಗೆ ಶ್ರೇಣಿಯನ್ನು ಪ್ರಕಟಿಸುವ ಸಲುವಾಗಿ ಗಳಿಸಲಾಗುವ ಅಂಕಗಳನ್ನು ಪಡೆದು) ಅಭ್ಯರ್ಥಿಗೆ ನಗದು ಬಹುಮಾನವನ್ನು ಪ್ರದಾನ ಮಾಡುವುದು. |

| | | |
|---|---|---|
| | ದತ್ತಿಯ ಹೆಸರು | 3) ಎಂ.ಪಿ ಸಚ್ಚಿದಾನಂದ ಸ್ಮರಣಾರ್ಥ ನಗದು ಬಹುಮಾನ |
| | ಷರತ್ತುಗಳು | ಎಂ.ಪಿ.ಎಡ್ ಪರೀಕ್ಷೆಯಲ್ಲಿ ಮೊದಲ ಬಾರಿಗೆ ತೇರ್ಗಡೆಯಾಗಿ ಅತೀ ಹೆಚ್ಚು ಅಂಕ ಗಳಿಸುವ (ಯಾವುದೇ ವರ್ಷಗಳಿಗೆ/ಸೆಮಿಸ್ಟರ್‌ಗಳಿಗೆ ಶ್ರೇಣಿಯನ್ನು ಪ್ರಕಟಿಸುವ ಸಲುವಾಗಿ ಗಳಿಸಲಾಗುವ ಅಂಕಗಳನ್ನು ಪಡೆದು) ಅಭ್ಯರ್ಥಿಗೆ ನಗದು ಬಹುಮಾನವನ್ನು ಪ್ರದಾನ ಮಾಡುವುದು. |
| | ದತ್ತಿಯ ಹೆಸರು | 4) ಕರ್ನಲ್ ಕನ್ವರ್ ಜೈದೀಪ್ ಸಿಂಗ್ ಸಲಾರಿಯಾ ಸ್ಮಾರಕ ನಗದು ಬಹುಮಾನ |
| | ಷರತ್ತುಗಳು | The Cash Prize Should be awarded to the candidate who has passed Master Degree Examination and Enrolled under NCC Quota with Highest NCC marks<br>*If multiple candidates with equal NCC marks, preference to be given to Master Degree candidate in Science. |
| II.7 | 2024-25ನೇ ಸಾಲಿನಲ್ಲಿ ಯುವರಾಜ ಕಾಲೇಜಿನಲ್ಲಿ ಬಿಸಿಎ ಕೋರ್ಸಿಗೆ ಹೆಚ್ಚುವರಿ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಳ್ಳಲು ಅನುಮತಿ ಕೋರಿರುವ ಬಗ್ಗೆ ಅನುಸಮರ್ಥನೆಗಾಗಿ. | |
| ತೀರ್ಮಾನ | 2024-25ನೇ ಶೈಕ್ಷಣಿಕ ಸಾಲಿಗೆ ಯುವರಾಜ ಕಾಲೇಜಿನಲ್ಲಿ ಬಿಸಿಎ ಪ್ರೋಗ್ರಾಂಗೆ ಹೆಚ್ಚುವರಿಯಾಗಿ 60 ವಿದ್ಯಾರ್ಥಿಗಳನ್ನು ಸ್ಕೀಂ "ಬಿ" ಅಡಿಯಲ್ಲಿ ದಂಡ ಶುಲ್ಕದೊಂದಿಗೆ ಪ್ರವೇಶಾತಿ ಮಾಡಿಕೊಳ್ಳಲು ಅನುಮತಿ ನೀಡಿರುವುದನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಸಮರ್ಥಿಸಿತು. | |
| II.8 | 2025-26ನೇ ಶೈಕ್ಷಣಿಕ ಸಾಲಿಗೆ ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿನ ಸ್ವಾಯತ್ತ ಕಾಲೇಜುಗಳಿಗೆ ಹಾಗೂ ಹಾಲಿ ಅಸ್ತಿತ್ವದಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೊಸದಾಗಿ ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸಲು ಸ್ಥಳೀಯ ವಿಚಾರಣಾ ಸಮಿತಿಗಳು ಭೇಟಿ ನೀಡಿ ಸಲ್ಲಿಸಿರುವ ಸಂಯೋಜನಾ ವರದಿಗಳನ್ನು ವಿದ್ಯಾವಿಷಯಕ ಪರಿಷತ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. | |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ಪ್ರಕರಣ 59 ಮತ್ತು 64ರನ್ವಯ 2025-26ನೇ ಶೈಕ್ಷಣಿಕ ಸಾಲಿಗೆ ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿನ ಸ್ವಾಯತ್ತ ಕಾಲೇಜುಗಳಿಗೆ ಹಾಗೂ ಹಾಲಿ ಅಸ್ತಿತ್ವದಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೊಸದಾಗಿ ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸಲು, ಸ್ಥಳೀಯ ವಿಚಾರಣಾ ಸಮಿತಿಗಳು ಭೇಟಿ ನೀಡಿ ಸಲ್ಲಿಸಿರುವ ಸಂಯೋಜನಾ ವರದಿಗಳನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. | |
| II.9 | ವಿಶ್ವವಿದ್ಯಾನಿಲಯದ ಸ್ವಾಯತ್ತ ಕಾಲೇಜುಗಳಿಂದ ಶುಲ್ಕ ಪಡೆಯುವ ಬಗ್ಗೆ. | |
| ತೀರ್ಮಾನ | ವಿಶ್ವವಿದ್ಯಾನಿಲಯದ ಸ್ವಾಯತ್ತ ಕಾಲೇಜುಗಳಿಂದ ಈ ಕೆಳಕಂಡ* ಶುಲ್ಕ ಶೀರ್ಷಿಕೆಗಳಡಿಯಲ್ಲಿ ಶುಲ್ಕಗಳನ್ನು ವಿಶ್ವವಿದ್ಯಾನಿಲಯಕ್ಕೆ ಪಾವತಿಸಿಕೊಳ್ಳುವ ಸಂಬಂಧ ವಿಷಯವನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು.<br>* (1) ನೋಂದಣಿ ಶುಲ್ಕ<br>(2) ಪ್ರವೇಶಾತಿ ಶುಲ್ಕ<br>(3) ಕ್ರೀಡಾಭಿವೃದ್ಧಿ ಶುಲ್ಕ<br>(4) ವಿದ್ಯಾರ್ಥಿ ಕ್ಷೇಮ ನಿಧಿ ಶುಲ್ಕ | |
| III **ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳು ಮಂಡಿಸಿದ ವಿಷಯಗಳು** | | |
| III.1 | ದಿನಾಂಕ: 10-06-2025ರಂದು ನಡೆದ ವಿಶ್ವವಿದ್ಯಾನಿಲಯ ಸ್ಕೂಲ್ ಆಫ್ ಇಂಜಿನಿಯರಿಂಗ್ ನಿಕಾಯ ಸಭೆಯ ನಡಾವಳಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುವ ಬಗ್ಗೆ. | |
| ತೀರ್ಮಾನ | ದಿನಾಂಕ: 10-06-2025ರಂದು ಜರುಗಿದ ವಿಶ್ವವಿದ್ಯಾನಿಲಯ ಸ್ಕೂಲ್ ಆಫ್ ಇಂಜಿನಿಯರಿಂಗ್ ನಿಕಾಯ ವಾರ್ಷಿಕ ಸಭೆಯ ನಡಾವಳಿಯನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. | |

| | |
|---|---|
| III.2 | ದಿನಾಂಕ: 10-06-2025ರಂದು ನಡೆದ ಕಾನೂನು ನಿಕಾಯ ಸಭೆಯ ನಡಾವಳಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುವ ಬಗ್ಗೆ. |
| ತೀರ್ಮಾನ | ದಿನಾಂಕ: 10-06-2025ರಂದು ಜರುಗಿದ ಕಾನೂನು ನಿಕಾಯ ವಾರ್ಷಿಕ ಸಭೆಯ ನಡಾವಳಿಯನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| III.3 | ದಿನಾಂಕ:11-06-2025ರಂದು ನಡೆದ ವಾಣಿಜ್ಯ ನಿಕಾಯ ಸಭೆಯ ನಡಾವಳಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುವ ಬಗ್ಗೆ. |
| ತೀರ್ಮಾನ | ದಿನಾಂಕ: 11-06-2025ರಂದು ಜರುಗಿದ ವಾಣಿಜ್ಯ ನಿಕಾಯ ವಾರ್ಷಿಕ ಸಭೆಯ ನಡಾವಳಿಯನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| III.3 (a) | Specialized Programme ಗಳ ವಾಣಿಜ್ಯ ನಿಕಾಯ ಸಭೆಯ ಶಿಫಾರಸ್ಸು ನಿರ್ಣಯಗಳ ಅನುಮೋದನೆ ಬಗ್ಗೆ. |
| ತೀರ್ಮಾನ | Specialized Programme ಗಳ ವಾಣಿಜ್ಯ ನಿಕಾಯ ಸಭೆಯ ಶಿಫಾರಸ್ಸುಗಳನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| III.4 | ದಿನಾಂಕ: 11-06-2025ರಂದು ನಡೆದ ಶಿಕ್ಷಣ ನಿಕಾಯ ಸಭೆಯ ನಡಾವಳಿಗಳನ್ನು ಅನುಮೋದನೆಗಾಗಿ ಸಲ್ಲಿಸುವ ಬಗ್ಗೆ. |
| ತೀರ್ಮಾನ | ದಿನಾಂಕ: 11-06-2025ರಂದು ಜರುಗಿದ ಶಿಕ್ಷಣ ನಿಕಾಯ ವಾರ್ಷಿಕ ಸಭೆಯ ನಡಾವಳಿಯನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| III.5 | ದಿನಾಂಕ: 12-06-2025ರಂದು ನಡೆದ ಕಲಾ ನಿಕಾಯ ಸಭೆಯ ನಡಾವಳಿಗಳನ್ನು ಅನುಮೋದನೆಗಾಗಿ ಮಂಡಿಸಿದೆ. |
| ತೀರ್ಮಾನ | Approved with the pattern of the Program structure of each Syllabus is as per the pattern of the Expert committee report dated 23-04-2025 provided by the University based on the Government Order dated 08-05-2024. |
| III.5 (b) | Specialized Programme ಗಳ ಕಲಾ ನಿಕಾಯ ಸಭೆಯ ಶಿಫಾರಸ್ಸು ನಿರ್ಣಯಗಳ ಅನುಮೋದನೆ ಬಗ್ಗೆ. |
| ತೀರ್ಮಾನ | Specialized Programme ಗಳ ಕಲಾ ನಿಕಾಯ ವಾರ್ಷಿಕ ಸಭೆಯ ಶಿಫಾರಸ್ಸುಗಳನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| III.6 | ದಿನಾಂಕ: 13-06-2025ರಂದು ನಡೆದ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ಸಭೆಯ ನಡಾವಳಿಗಳನ್ನು ಅನುಮೋದನೆಗಾಗಿ ಸಲ್ಲಿಸುವ ಬಗ್ಗೆ. |
| ತೀರ್ಮಾನ | ದಿನಾಂಕ: 13-06-2025ರಂದು ನಡೆದ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ವಾರ್ಷಿಕ ಸಭೆಯ ನಡಾವಳಿಯನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| III.6 (c) | Specialized Programme ಗಳ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ಸಭೆಯ ಶಿಫಾರಸ್ಸು ನಿರ್ಣಯಗಳ ಅನುಮೋದನೆ ಬಗ್ಗೆ. |
| ತೀರ್ಮಾನ | Specialized Programme ಗಳ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ವಾರ್ಷಿಕ ಸಭೆಯ ಶಿಫಾರಸ್ಸುಗಳನ್ನು ವಿದ್ಯಾವಿಷಯಕ ಪರಿಷತ್ ಸಭೆಯು ಅನುಮೋದಿಸಿತು. |
| **ಶಿಕ್ಷಣ ಮಂಡಳಿ ಸದಸ್ಯರು ಮಂಡಿಸಿದ ನಿರ್ಣಯಗಳು** | |
| IV | -- |

**ಇತರೆ ವಿಷಯಗಳು:**

1) ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಚಿನ್ನದ ಪದಕ ದತ್ತಿ ಮತ್ತು ನಗದು ಬಹುಮಾನ ದತ್ತಿ ಸ್ಥಾಪನೆಗೆ ಸಂಬಂಧಿಸಿದಂತೆ ಸದರಿ ಶಿಕ್ಷಣ ಮಂಡಳ ಸಭೆಯು ಅನುಮೋದಿಸಿದ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರದಿಂದ ಮೈಸೂರು ವಿಶ್ವವಿದ್ಯಾನಿಲಯದ ಶಿಕ್ಷಣ ಮಂಡಳ ಸದಸ್ಯರಾಗಿ ನಾಮನಿರ್ದೇಶನಗೊಂಡು ಪ್ರಥಮ ಸಭೆಯಲ್ಲಿ ಭಾಗವಹಿಸಿದ ವಿಧಾನ ಪರಿಷತನ ಮಾನ್ಯ ಸದಸ್ಯರಾದ ಶ್ರೀ ಕೆ.ವಿವೇಕಾನಂದ ಅವರು ತಮ್ಮ ಪೋಷಕರ ಹೆಸರಿನಲ್ಲಿ ದತ್ತಿ ಸ್ಥಾಪಿಸುವುದಾಗಿ ಸಭೆಯಲ್ಲಿ ಘೋಷಿಸಿದರು.

2) ಮಾನ್ಯ ಕುಲಪತಿಗಳು ಮಾತನಾಡಿ, ಪ್ರತಿಯೊಂದು ವಿಷಯದ ಪ್ರೋಗ್ರಾಂ ರಚನೆಯಲ್ಲಿನ ಕ್ರೆಡಿಟ್ ಮತ್ತು ಬೋಧನಾ ಗಂಟೆಗಳು ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ದಿನಾಂಕ: ೦8.05.2024ರ ಆದೇಶದಲ್ಲಿ ನಿರ್ದಿಷ್ಟಪಡಿಸಿರುವಂತೆ ಕಟ್ಟುನಿಟ್ಟಾಗಿ ಪಾಲಿಸಲು ತಿಳಿಸಿದರು.

3) ಪ್ರೊ. ಜೆ.ಸೋಮಶೇಖರ್, ಪ್ರಾಧ್ಯಾಪಕರು, ಡಾ. ಬಿ.ಆರ್.ಅಂಬೇಡ್ಕರ್ ಸಂಶೋಧನ ಮತ್ತು ವಿಸ್ತರಣ ಕೇಂದ್ರ, ಮಾನಸಗಂಗೋತ್ರಿ, ಮೈಸೂರು ಇವರು ಮಾತನಾಡಿ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2003 ರಿಂದಲೂ ಕಾರ್ಯನಿರ್ವಹಿಸುತ್ತಿದ್ದು, ವಿಶ್ವವಿದ್ಯಾನಿಲಯದ ಕಾಲೇಜು ಅಭಿವೃದ್ಧಿ ಮಂಡಳ ವತಿಯಿಂದ ವಿಶ್ವವಿದ್ಯಾನಿಲಯದ ಸಂಯೋಜನೆಗೊಳಪಡುವ ಕಾಲೇಜುಗಳಿಗೆ ಸಂಯೋಜನೆಯನ್ನು ನೀಡುವ ಸಂಬಂಧ ಸ್ಥಳೀಯ ವಿಚಾರಣಾ ಸಮಿತಿಗಳು ಭೇಟಿ ನೀಡಿ ಪರಾಮರ್ಶಿಸುತ್ತಿದ್ದು, ಸದರಿ ಸ್ಥಳೀಯ ವಿಚಾರಣಾ ಸಮಿತಿಗಳಿಗೆ ನಮ್ಮ ಅಧ್ಯಯನ ವಿಭಾಗದ ಯಾವುದೇ ಪ್ರಾಧ್ಯಾಪಕರನ್ನು ಇದುವರೆವಿಗೂ ಸದಸ್ಯರನ್ನಾಗಿ ಪರಿಗಣಿಸಿರುವುದಿಲ್ಲವೆಂದು ತಿಳಿಸಿದರು.

ಈ ಸಂಬಂಧ ಮಾನ್ಯ ಕುಲಪತಿಗಳು ಮಾತನಾಡಿ, ಮುಂದಿನ ಶೈಕ್ಷಣಿಕ ಸಾಲಿನಲ್ಲಿ ಸ್ಥಳೀಯ ವಿಚಾರಣಾ ಸಮಿತಿಗೆ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನ ಮತ್ತು ವಿಸ್ತರಣ ಕೇಂದ್ರದ ಪ್ರಾಧ್ಯಾಪಕರನ್ನು ಸದಸ್ಯರನ್ನಾಗಿ ಸೇರ್ಪಡೆಗೊಳಿಸಲಾಗುವುದು ಎಂದು ತಿಳಿಸಿದರು.

4) ಮಾನ್ಯ ಕುಲಪತಿಯವರು ಮಾತನಾಡಿ, ಕರ್ನಾಟಕ ರಾಜ್ಯ ಸರ್ಕಾರದ ಶಿಕ್ಷಣ ನೀತಿಯನ್ನು ರೂಪಿಸುವ ಸಂಬಂಧ ರಾಜ್ಯ ಸರ್ಕಾರದಿಂದ ರಚಿಸಲಾಗಿದ್ದಂತಹ ತಜ್ಞರ ಸಮಿತಿಯು ವರದಿಯನ್ನು ಸದ್ಯದಲ್ಲಿಯೇ ಸರ್ಕಾರಕ್ಕೆ ಸಲ್ಲಿಸಲಿದ್ದಾರೆ.

ಪ್ರಸ್ತುತ ಮೈಸೂರು ವಿಶ್ವವಿದ್ಯಾನಿಲಯವು ಈಗಾಗಲೇ ಸಿದ್ಧಪಡಿಸಿರುವ ಎರಡನೇ ವರ್ಷದ ಮೂರು ಮತ್ತು ನಾಲ್ಕನೇ ಚತುರ್ಮಾಸದ ಪಠ್ಯಕ್ರಮಗಳ ಮಾರ್ಪಾಡು ಮಾಡುವ ಸಂಬಂಧ ಮುಂಬರುವ ದಿನಗಳಲ್ಲಿ ಸರ್ಕಾರದಿಂದ ಯಾವುದಾದರೂ ನಿರ್ದೇಶನ ನೀಡಿದಲ್ಲಿ, ಸದರಿ ನಿರ್ದೇಶನದಂತೆ ಪಠ್ಯಕ್ರಮಗಳಲ್ಲಿ ಸಣ್ಣ ಪ್ರಮಾಣದ ಬದಲಾವಣೆಗಳನ್ನು ಮಾಡಿಕೊಳ್ಳಬೇಕಾಗುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು.

5) ಕಲಾ ನಿಕಾಯದ ಡೀನರಾದ ಪ್ರೊ. ಎಂ.ಎಸ್.ಶೇಖರ್‌ರವರು ಮಾತನಾಡಿ, ಪಿಹೆಚ್.ಡಿ ಸಂಶೋಧನಾ ಕಾರ್ಯಕ್ಕೆ ಸೇರ್ಪಡೆಗೊಳ್ಳಲು ಹಲವಾರು ವಿದ್ಯಾರ್ಥಿಗಳು ಕೇಂದ್ರ ಸರ್ಕಾರದ ಯುಜಿಸಿ ವತಿಯಿಂದ ನಡೆಸಲ್ಪಡುವ ಜೆಆರ್‌ಎಫ್ ಪರೀಕ್ಷೆಯನ್ನು ತೇರ್ಗಡೆ ಹೊಂದಿದ್ದು, ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರ ಕೊರತೆ ತೀವ್ರವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಹಲವಾರು ಖಾಸಗಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರುಗಳು ಮಾರ್ಗದರ್ಶಕರ ಮಾನ್ಯತೆಯನ್ನು ನೀಡುವಂತೆ ಅಧ್ಯಯನ ಮಂಡಳಿಗೆ ಮನವಿ ಸಲ್ಲಿಸಿದ್ದು, ಸದರಿ ಮನವಿಯನ್ನು ಪರಿಶೀಲಿಸಲಾಗಿ ಯುಜಿಸಿ ನಿಯಮಾನುಸಾರ ಬೋಧಕರು ಖಾಯಂ ವೃಂದದವರೇ ಅಥವಾ ತಾತ್ಕಾಲಿಕ ವೃಂದದವರೇ ಎಂಬುದಕ್ಕೆ ನಿರ್ದಿಷ್ಟವಾದ ಮಾಹಿತಿ ಇರುವುದಿಲ್ಲ. ಯುಜಿಸಿ ನಿಯಮಾವಳಿ ಪ್ರಕಾರ ಮಾರ್ಗದರ್ಶಕರಾಗುವ ಬೋಧಕರು ಖಾಯಂ ಬೋಧಕರಾಗಿರಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಮಾರ್ಗದರ್ಶಕರ ಮಾನ್ಯತೆಯನ್ನು ನೀಡಲು ಹಲವಾರು ಸಮಸ್ಯೆಗಳು ಹಾಗೂ ಗೊಂದಲಗಳು ಉಂಟಾಗುತ್ತಿದ್ದು, ಇದನ್ನು ವಿಶ್ವವಿದ್ಯಾನಿಲಯವು ಸರಿಪಡಿಸಬೇಕೆಂದು ಸಭೆಯ ಗಮನಕ್ಕೆ ತಂದರು.

ಮಾನ್ಯ ಕುಲಪತಿಗಳು ಮಾತನಾಡಿ, ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರು ಖಾಯಂ ಅಥವಾ ತಾತ್ಕಾಲಿಕವೇ ಎಂಬುದು ತಿಳಿದಿರುವುದಿಲ್ಲ ಇವರನ್ನು ಕಾಲೇಜು ಶಿಕ್ಷಣ ಇಲಾಖೆ ವತಿಯಿಂದ ಅನುಮೋದನೆಯನ್ನು ಪಡೆದು ಬೋಧಕರುಗಳನ್ನು ನೇಮಕ ಮಾಡಿಕೊಂಡಿರುತ್ತಾರೆ. ಮುಂದುವರೆದು, ಪಿಎಚ್.ಡಿ. ಮಾರ್ಗದರ್ಶಕರಾಗಿ ಮಾನ್ಯತೆ ನೀಡಲು ಯುಜಿಸಿ ನಿಯಮಗಳಡಿಯಲ್ಲಿ ಆಯಾ ವಿಷಯದ ಅಧ್ಯಯನ ಮಂಡಳಿಯ ಶಿಫಾರಸ್ಸು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿದರು.

ಅಂತಿಮವಾಗಿ ಸಭೆಯಲ್ಲಿ ಮುಕ್ತವಾಗಿ ಚರ್ಚಿಸಿ ಸೂಕ್ತ ನಿರ್ಣಯಗಳನ್ನು ತೆಗೆದುಕೊಳ್ಳಲು ಸಹಕರಿಸಿದ ಗೌರವಾನ್ವಿತ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ವಂದನೆಗಳನ್ನರ್ಪಿಸಿ ಸಭೆಯು ಮುಕ್ತಾಯವಾಯಿತು.

ಸಹಿ/-
ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ

ಸಹಿ/-
ಕುಲಪತಿಗಳು ಹಾಗೂ ಅಧ್ಯಕ್ಷರು